# ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ : ಕೇಂದ್ರ ಕಛೇರಿ : ಹುಬ್ಬಳ್ಳಿ

ಸಂ:ವಾಕರಸಾ:ಕೇಕ:ಹು:ಸಿಬ್ಬಂದಿ:ಎ1: 2016 ದಿನಾಂಕ: 10-12-2019

## ಜಾಹೀರಾತು ಸಂಖ್ಯೆ: 01/2019

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ 2019–2020ನೇ ಸಾಲಿನ ಕಾರ್ಯ ಯೋಜನೆಯನುಸಾರ ಕಾರ್ಯಾಚರಣೆಗೊಳಿಸಬೇಕಾದ ಅನುಸೂಚಿಗಳಿಗೆ ಅವಶ್ಯಕವಾದ **ಚಾಲಕ (ಎಲ್ಲ ವರ್ಗದ ಅಭ್ಯರ್ಥಿಗಳಿಗೆ) ಹಾಗೂ ಚಾಲಕ–ಕಂ–ನಿರ್ವಾಹಕ(ಪಜಾ ಅಭ್ಯರ್ಥಿಗಳಿಗೆ– ಹಿಂಬಾಕಿ)** (ದರ್ಜೆ–III) ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಆಯ್ಕೆ ಮಾಡಲು ಸಂಸ್ಥೆಯು ಅಳವಡಿಸಿಕೊಂಡಿರುವ ಕ.ರಾ.ರ.ಸಾ.ಸಂಸ್ಥೆಯ ಪದವೃಂದ ಮತ್ತು ನೇಮಕಾತಿ ನಿಯಮಾವಳಿ–1982ರ ಹಾಗೂ ಆದರ ತಿದ್ದುಪಡಿಗಳ ಅನುಸಾರ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ **(ON LINE)** ಮುಖಾಂತರ ಅರ್ಜಿಗಳನ್ನು ಕರೆಯಲಾಗಿದೆ. ಆಯ್ಕೆಗೊಂಡ ಅಭ್ಯರ್ಥಿಗಳನ್ನು ಅವಶ್ಯಕತೆಗೆ ಅನುಗುಣವಾಗಿ ಜಾರಿಯಲ್ಲಿರುವ ರೋಸ್ಟರ್ ನಿಯಮದ ಅನುಸಾರ ಎರಡು ವರ್ಷಗಳ ಕಾಲ "**ಕೆಲಸದ ಮೇಲೆ ತರಬೇತಿ**"ಗೆ (On the Job Trainee) ನಿಯೋಜಿಸಲಾಗುವುದು. ಹುದ್ದೆಗಳ ಮೀಸಲಾತಿ ವರ್ಗೀಕರಣ ಈ ಕೆಳಗಿನಂತಿರುತ್ತದೆ.

**ಚಾಲಕ**

| ಸಮತಳ ಮೀಸಲಾತಿ | ಹುದ್ದೆಗಳ ವರ್ಗೀಕರಣ | | | | | | | | |
|---|---|---|---|---|---|---|---|---|---|
| | **SC** | **ST** | **I** | **2A** | **2B** | **3A** | **3B** | **GM** | **Total** |
| ಇತರೇ | 82 | 15 | 22 | 82 | 22 | 22 | 27 | 274 | **546** |
| ಮಹಿಳಾ | 123 | 26 | 33 | 123 | 33 | 33 | 41 | 413 | **825** |
| ಗ್ರಾಮೀಣ | 94 | 20 | 25 | 94 | 25 | 25 | 31 | 312 | **626** |
| ಮಾ.ಸೈನಿಕ | 38 | 7 | 10 | 38 | 10 | 10 | 13 | 125 | **251** |
| ಕನ್ನಡ ಮಾಧ್ಯಮ | 19 | 4 | 5 | 19 | 5 | 5 | 6 | 63 | **126** |
| ಯೋಜನಾ ನಿರಾಶ್ರಿತ | 19 | 3 | 5 | 19 | 5 | 5 | 7 | 63 | **126** |
| ಒಟ್ಟು | **375** | **75** | **100** | **375** | **100** | **100** | **125** | **1250** | **2500** |

**ಚಾಲಕ (ಪರಿಶಿಷ್ಟ ಜಾತಿ–ಹಿಂಬಾಕಿ)**

| ಮಾಜಿ ಸೈನಿಕ | ಯೋಜನಾ ನಿರಾಶ್ರಿತ | ಒಟ್ಟು |
|---|---|---|
| 40 | 15 | **55** |

**ಚಾಲಕ–ಕಂ–ನಿರ್ವಾಹಕ (ಪರಿಶಿಷ್ಟ ಜಾತಿ–ಹಿಂಬಾಕಿ)**

| ಇತರೇ | ಮಹಿಳಾ | ಗ್ರಾಮೀಣ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ಒಟ್ಟು |
|---|---|---|---|---|---|---|
| 62 | 59 | 50 | 56 | 10 | 22 | **259** |

ಪ್ರಕಟಿಸಲಾದ ಖಾಲಿ ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು ಆಯ್ಕೆ ಸಮಯದಲ್ಲಿ ಅವಶ್ಯಕತೆಗನುಗುಣವಾಗಿ ಮಾರ್ಪಾಡುಗೊಳಿಸಬಹುದಾಗಿರುತ್ತದೆ. ಆಯ್ಕೆ ಹೊಂದಿದ ಅಭ್ಯರ್ಥಿಗಳನ್ನು ಈ ಸಂಸ್ಥೆಯ ವ್ಯಾಪ್ತಿಯಲ್ಲಿನ ಬಾಗಲಕೋಟ, ಬೆಳಗಾವಿ, ಚಿಕ್ಕೋಡಿ, ಧಾರವಾಡ, ಗದಗ, ಹಾವೇರಿ, ಹುಬ್ಬಳ್ಳಿ(ಗ್ರಾ), ಹುಬ್ಬಳ್ಳಿ–ಧಾರವಾಡ ನಗರ ಸಾರಿಗೆ, ಹಾಗೂ ಉತ್ತರ ಕನ್ನಡ ಶಿರಸಿ ವಿಭಾಗಗಳ ವ್ಯಾಪ್ತಿಯಲ್ಲಿ ಬರುವ ಯಾವುದೇ ಘಟಕಗಳಿಗೆ ನಿಯೋಜಿಸಬಹುದಾಗಿರುತ್ತದೆ. **(ಆಯ್ಕೆಯಾದ ಅಭ್ಯರ್ಥಿಗಳು ವಾ.ಕ.ರ.ಸಾ.ಸಂಸ್ಥೆಯಿಂದ ಇತರೆ ಸಂಸ್ಥೆಗಳಾದ ಕ.ರಾ.ರ.ಸಾ.ನಿಗಮ, ಬೆಂ.ಮ.ಸಾ.ಸಂಸ್ಥೆ ಮತ್ತು ಈ.ಕ.ರ.ಸಾ.ಸಂಸ್ಥೆಗಳಿಗೆ ವರ್ಗಾವಣೆ ಹೊಂದಲು ಅವಕಾಶವಿರುವುದಿಲ್ಲ.)**



Printed by BoltPDF (c) NCH Software. Free for non-commercial use only.

**ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ : 08-01-2020 ರಂದು**

## I) ಅರ್ಹತೆ :

**ಚಾಲಕ ಹುದ್ದೆಗೆ :**

1. ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯಲ್ಲಿ ತೇರ್ಗಡೆಯಾಗಿರಬೇಕು. (ರಾಜ್ಯ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ನಡೆಸಲಾಗುವ ಎಸ್.ಎಸ್.ಎಲ್.ಸಿ ಅಥವಾ ರಾಜ್ಯ ಸರ್ಕಾರವು ತತ್ಸಮಾನವೆಂದು ಪರಿಗಣಿಸಿದ ವಿದ್ಯಾರ್ಹತೆ) ಮುಕ್ತ ವಿದ್ಯಾಲಯದಿಂದ ವಿತರಿಸಿರುವ 500 ಅಂಕಗಳ ಎಸ್.ಎಸ್.ಸಿ ವಿದ್ಯಾರ್ಹತೆಯ ಅಂಕಪಟ್ಟಿಯನ್ನು ಪರಿಗಣಿಸಲಾಗುವುದಿಲ್ಲ. **ಭಾರತೀಯ ವಿದ್ಯಾಲಯ ಶಿಕ್ಷಾ ಬೋರ್ಡ್ ಮಂಡಳಿಯಿಂದ ಅಂಗೀಕೃತವಾದ ಮಂಡಳಿಯನ್ನು ಹೊರತುಪಡಿಸಿ,** ಇನ್ನುಳಿದ ಯಾವುದೇ ಸಂಸ್ಥೆ / ಮಂಡಳಿಗಳಿಂದ ನಡೆಸಿದ ವಿದ್ಯಾರ್ಹತೆಯ ಅಂಕಪಟ್ಟಿಯನ್ನು ಪರಿಗಣಿಸಲಾಗುವುದಿಲ್ಲ.
2. ಚಾಲ್ತಿಯಲ್ಲಿರುವ ಭಾರಿ ಸರಕು ಸಾಗಾಣಿಕೆ ವಾಹನ (HTV) ಚಾಲನಾ ಪರವಾನಿಗೆ ಹೊಂದಿ ಕನಿಷ್ಠ 2 ವರ್ಷಗಳಾಗಿರಬೇಕು ಮತ್ತು ಪ್ರಯಾಣಿಕರ ಭಾರಿ ವಾಹನ ಚಾಲನಾ ಪರವಾನಿಗೆ ಹಾಗೂ ಕರ್ನಾಟಕ PSV ಬ್ಯಾಡ್ಜ್ ಹೊಂದಿರಬೇಕು.

**ಚಾಲಕ–ಕಂ–ನಿರ್ವಾಹಕ (ಪಜಾ–ಹಿಂಬಾಕಿ) ಹುದ್ದೆಗೆ :**

1. ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯಲ್ಲಿ ತೇರ್ಗಡೆಯಾಗಿರಬೇಕು. (ರಾಜ್ಯ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ನಡೆಸಲಾಗುವ ಎಸ್.ಎಸ್.ಎಲ್.ಸಿ ಅಥವಾ ರಾಜ್ಯ ಸರ್ಕಾರವು ತತ್ಸಮಾನವೆಂದು ಪರಿಗಣಿಸಿದ ವಿದ್ಯಾರ್ಹತೆ) ಮುಕ್ತ ವಿದ್ಯಾಲಯದಿಂದ ವಿತರಿಸಿರುವ 500 ಅಂಕಗಳ ಎಸ್.ಎಸ್.ಸಿ ವಿದ್ಯಾರ್ಹತೆಯ ಅಂಕಪಟ್ಟಿಯನ್ನು ಪರಿಗಣಿಸಲಾಗುವುದಿಲ್ಲ. **ಭಾರತೀಯ ವಿದ್ಯಾಲಯ ಶಿಕ್ಷಾ ಬೋರ್ಡ್ ಮಂಡಳಿಯಿಂದ ಅಂಗೀಕೃತವಾದ ಮಂಡಳಿಯನ್ನು ಹೊರತುಪಡಿಸಿ,** ಇನ್ನುಳಿದ ಯಾವುದೇ ಸಂಸ್ಥೆ / ಮಂಡಳಿಗಳಿಂದ ನಡೆಸಿದ ವಿದ್ಯಾರ್ಹತೆಯ ಅಂಕಪಟ್ಟಿಯನ್ನು ಪರಿಗಣಿಸಲಾಗುವುದಿಲ್ಲ.
2. ಚಾಲ್ತಿಯಲ್ಲಿರುವ ಭಾರಿ ಸರಕು ಸಾಗಾಣಿಕೆ ವಾಹನ (HTV) ಚಾಲನಾ ಪರವಾನಿಗೆ ಹೊಂದಿ ಕನಿಷ್ಠ 2 ವರ್ಷಗಳಾಗಿರಬೇಕು ಮತ್ತು ಪ್ರಯಾಣಿಕರ ಭಾರಿ ವಾಹನ ಚಾಲನಾ ಪರವಾನಿಗೆ ಹಾಗೂ ಕರ್ನಾಟಕ PSV ಬ್ಯಾಡ್ಜ್ ಹೊಂದಿರಬೇಕು.
3. ಚಾಲ್ತಿಯಲ್ಲಿರುವ ನಿರ್ವಾಹಕ ಪರವಾನಗಿ ಮತ್ತು ಕರ್ನಾಟಕ ಬ್ಯಾಡ್ಜ್ ಹೊಂದಿರಬೇಕು.

## II) ಕನಿಷ್ಠ ದೇಹದಾರ್ಢ್ಯತೆ

| | ಎತ್ತರ | ತೂಕ |
|---|---|---|
| ಪುರುಷರಿಗೆ | 163 ಸೆಂ. ಮೀ | 55 ಕೆ.ಜಿ |
| ಮಹಿಳೆಯರಿಗೆ | 153 ಸೆಂ. ಮೀ | 50 ಕೆ.ಜಿ |

## III) ವಯೋಮಿತಿ:

1. **ಚಾಲಕ ಮತ್ತು ಚಾಲಕ–ಕಂ–ನಿರ್ವಾಹಕ ಹುದ್ದೆಗೆ** ಭರ್ತಿ ಮಾಡಿದ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಕನಿಷ್ಠ 24 ವರ್ಷಗಳು ತುಂಬಿರಬೇಕು.
2. ಈ ಕೆಳಕಂಡಂತೆ ಗರಿಷ್ಠ ವಯೋಮಿತಿ ಮೀರಿರಬಾರದು.

| ವರ್ಗ | ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯೋಮಿತಿ |
|---|---|
| 1) ಪಜಾ/ಪಪಂ/ವರ್ಗ–1 | 40 ವರ್ಷಗಳು |
| 2) ಪ್ರವರ್ಗ–2ಎ, 2ಬಿ, 3ಎ, 3ಬಿ | 38 ವರ್ಷಗಳು |
| 3) ಸಾಮಾನ್ಯ ವರ್ಗ | 35 ವರ್ಷಗಳು |

4)



Printed by BoltPDF (c) NCH Software. Free for non-commercial use only.

3) ಇಲಾಖಾ ಅಭ್ಯರ್ಥಿಗಳಿಗೆ ಅವರ ಸೇವಾವಧಿಯ ವರ್ಷಗಳಲ್ಲಿ ಗರಿಷ್ಠ 10 ವರ್ಷಗಳಿಗೆ ಮೀರದಂತೆ ಹೆಚ್ಚುವರಿ ವಯೋಮಿತಿ ರಿಯಾಯತಿಯನ್ನು ಕೊಡಲಾಗುವುದು. ಆದರೆ ಅವರ ವಯಸ್ಸು 45 ವರ್ಷ ಮೀರಿರಬಾರದು.

4) ಮಾಜಿ ಸೈನಿಕರಿಗೆ ಸಂಬಂಧಿಸಿದಂತೆ ಈ ಕೆಳಕಂಡ ಪರಿಭಾಷೆಯನ್ನು ಹೊಂದಿರತಕ್ಕದ್ದು.

EX-SERVICEMEN. means a person, who has served in any rank (whether as a combatant or as a non-combatant) in the regular Army, Navy and Air Forces of the Union but does not include a person who has served in the Defence Security Corps, the General Reserve Engineering Force, the Lok Sahayak Sene and Para Military Forces and

a) Who has retired from such services earning his pension, or

b) Who has been released from such service on Medical Grounds attributable to military service or circumstances beyond his control and awarded medical or other disability pensions, or

c) Who has been released otherwise than on his own request from such service as a result of reduction in Establishment, or

d) Who has been released from such service after completing the specific period of engagement otherwise than at his own request or by way of dismissal or discharge on account of mis-conduct or in-efficiency and has been given a gratuity and includes personnel of the Territorial Army of the following categories, namely:

(i) Pension holders for continuous embodied service

(ii) Pension with disability attributable to military service; and

(iii) Gallantry award winners

In respect of Ex-Servicemen, by three years plus by the number of years of service rendered by him in Armed Forces of the Union subject to the condition that the Ex-servicemen shall not have completed 45 years of age.

**IV) ನಿಗದಿತ ಶುಲ್ಕ /ಶುಲ್ಕ ಪಾವತಿ ಮಾಡುವ ವಿಧಾನ ಮತ್ತು ವಿವರ :** ಅಭ್ಯರ್ಥಿಗಳು ಅರ್ಜಿಶುಲ್ಕವನ್ನು ಪಾವತಿ ಮಾಡುವ ಕುರಿತು ಈ ಕೆಳಗಿನ ನಿರ್ದೇಶನಗಳನ್ನು ತಪ್ಪದೇ ಪಾಲಿಸತಕ್ಕದ್ದು.

| ವರ್ಗ/ಗುಂಪಿಗೆ ಸಂಬಂಧಪಟ್ಟ ಅಭ್ಯರ್ಥಿಗಳು | ಅರ್ಜಿ ಶುಲ್ಕ (ಒಂದು ಹುದ್ದೆಗೆ) |
|---|---|
| ಅ) ಪ.ಜಾ./ಪ.ಪಂ/ವರ್ಗ–1/ಮಾಜಿ ಸೈನಿಕ ಮತ್ತು ಅಶಕ್ತ ಮಾಜಿ ಸೈನಿಕರ ಅವಲಂಬಿತರಿಗೆ | ರೂ. 300-00 |
| ಆ) ವರ್ಗ:2ಎ/2ಬಿ/3ಎ/3ಬಿ/ಸಾಮಾನ್ಯ | ರೂ. 600-00 |

**(ವಿಶೇಷ ಸೂಚನೆ : ಚಾಲಕ ಮತ್ತು ಚಾಲಕ–ಕಂ–ನಿರ್ವಾಹಕ (ಪಜಾ ಅಭ್ಯರ್ಥಿಗಳು ಮಾತ್ರ) ಎರಡೂ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು ಎರಡೂ ಹುದ್ದೆಗಳಿಗೆ ನಿಗದಿಪಡಿಸಿದ ಅರ್ಜಿ ಶುಲ್ಕ ಪಾವತಿಸಬೇಕಾಗುತ್ತದೆ.)**

**V) ಶುಲ್ಕ ಪಾವತಿ ಮಾಡುವ ರೀತಿ ಹಾಗೂ ವಿವರ :**

ಅಭ್ಯರ್ಥಿಗಳು www.nwkrtc.in ನಲ್ಲಿ ON LINE ಮೂಲಕ ಅರ್ಜಿ ಸಲ್ಲಿಸಿದ ನಂತರ ಚಲನ್ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನಿಗದಿತ ಅರ್ಜಿ ಶುಲ್ಕವನ್ನು ಪ್ರಧಾನ ಅಂಚೆ ಕಚೇರಿಯ ಕೆಲಸದ ವೇಳೆಯೊಳಗೆ ಯಾವುದೇ ಎಲೆಕ್ಟ್ರಾನಿಕ್ ಅಂಚೆ ಕಚೇರಿಯಲ್ಲಿ (Computerised Post Offices only) ಮಾತ್ರ ಇ–ಪೇಮೆಂಟ್ ಮೂಲಕ ಸಂದಾಯ ಮಾಡಬಹುದಾಗಿರುತ್ತದೆ. ಶುಲ್ಕವನ್ನು ಪಾವತಿಸದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅಂಚೆ ಕಚೇರಿಯಲ್ಲಿ ಅರ್ಜಿ ಶುಲ್ಕ ಪಾವತಿಸಿದ ಮೂಲ ಚಲನ್ ಪ್ರತಿಯನ್ನು ಮೂಲ ದಾಖಲಾತಿ / ದೈಹಿಕ ಅರ್ಹತೆ ಪರಿಶೀಲನೆ ಹಾಗೂ ಚಾಲನಾ ವೃತ್ತಿ ಪರೀಕ್ಷೆ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

ಅ) ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಅದನ್ನು ಸಂಸ್ಥೆಯು ನಡೆಸುವ ಇತರೆ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

ಆ) ಅರ್ಜಿಯನ್ನು ಯಶಸ್ವಿಯಾಗಿ ಸಲ್ಲಿಸಿದ ನಂತರ ಅರ್ಜಿ ಶುಲ್ಕ ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ :08–01–2020 ರ ಒಳಗಾಗಿ ಅರ್ಜಿ ಶುಲ್ಕವನ್ನು ತುಂಬಬೇಕಾಗುತ್ತದೆ. ಅಭ್ಯರ್ಥಿಗಳು ಅರ್ಜಿ ಶುಲ್ಕವನ್ನು ತುಂಬದೇ ಇದ್ದಲ್ಲಿ ಅವರ ಅರ್ಜಿಯು ತಿರಸ್ಕೃತಗೊಳ್ಳುತ್ತದೆ. ಸಂಸ್ಥೆಯು ನಿಗದಿಪಡಿಸಿದ ಮುದ್ರಿತ



Printed by BoltPDF (c) NCH Software. Free for non-commercial use only.

ಚಲನ್ ಹೊರತುಪಡಿಸಿ ಇನ್ನುಳಿದ ಯಾವುದೇ ರೀತಿಯಲ್ಲಿ ಅಂದರೆ ಡಿ.ಡಿ / ಐ.ಪಿ.ಓ / ಚೆಕ್ ಇತ್ಯಾದಿಗಳ ಮೂಲಕ ಸಲ್ಲಿಸಿದ ಅರ್ಜಿ ಶುಲ್ಕವನ್ನು ಪರಿಗಣಿಸಲಾಗುವುದಿಲ್ಲ. ಇಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ವಿಶೇಷ ಸೂಚನೆ : ಅರ್ಜಿ ಶುಲ್ಕವನ್ನು ಪಾವತಿಸದಿರುವುದು ಅಥವಾ ಕಡಿಮೆ ಮೊತ್ತದ ಅರ್ಜಿ ಶುಲ್ಕವನ್ನು ಪಾವತಿಸಿರುವುದು ಯಾವುದೇ ಸಂದರ್ಭದಲ್ಲಿ ಕಂಡು ಬಂದರೂ ಸಹ ಅಂತಹ ಅಭ್ಯರ್ಥಿಗಳ ಅಭ್ಯರ್ಥನವನ್ನು ತಿರಸ್ಕರಿಸಲಾಗುವುದು.**

## VI) ಅರ್ಜಿ ಸಲ್ಲಿಸುವ ವಿಧಾನ ಮತ್ತು ಕೊನೆಯ ದಿನಾಂಕ :

1. ಅರ್ಜಿಯನ್ನು ಕಡ್ಡಾಯವಾಗಿ ಆನ್‌ಲೈನ್ ಮುಖಾಂತರವೇ ವಾ ಕ ರ ಸಾ ಸಂಸ್ಥೆಯ ವೆಬ್‌ಸೈಟ್ www.nwkrtc.in ಮೂಲಕವೇ ಸಲ್ಲಿಸಬೇಕು. ಅರ್ಜಿ ಸಲ್ಲಿಸುವ ಮೊದಲು ಜಾಹೀರಾತನ್ನು ಸಂಪೂರ್ಣವಾಗಿ ಓದಿ ಅರ್ಥೈಸಿಕೊಳ್ಳುವುದು. ಇದಲ್ಲದೆ ಅರ್ಜಿ ಸಲ್ಲಿಸಲು ಅಗತ್ಯವಾದ ಮಾರ್ಗದರ್ಶನವನ್ನು ವೆಬ್‌ಸೈಟ್‌ನಲ್ಲಿ ತಪ್ಪದೇ ಓದಿಕೊಳ್ಳುವುದು.
2. ದಿನಾಂಕಃ **10-12-2019** ರಿಂದ **08-01-2020** ರವರೆಗೆ ವೆಬ್‌ಸೈಟ್ ತೆರೆದಿರುತ್ತದೆ. ಭರ್ತಿ ಮಾಡಿದ ಅರ್ಜಿಗಳನ್ನು **ದಿನಾಂಕಃ 08-01-2020 ಸಾಯಂಕಾಲ 17.30** ಗಂಟೆಯೊಳಗೆ ಆನ್‌ಲೈನ್‌ನಲ್ಲಿ ಸಲ್ಲಿಸಬಹುದಾಗಿರುತ್ತದೆ.
3. ನಿಗದಿತ ಕೊನೆಯ ದಿನಾಂಕ ಮತ್ತು ಸಮಯದ ನಂತರ ಬರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
4. ಅಭ್ಯರ್ಥಿಗಳು ಕೇವಲ ಒಂದು ಬಾರಿ ಮಾತ್ರ ಅರ್ಜಿಯನ್ನು ಸಲ್ಲಿಸಬಹುದಾಗಿದ್ದು, ಒಮ್ಮೆ ಸಲ್ಲಿಸಿದ ಅರ್ಜಿಯನ್ನು ಯಾವುದೇ ಕಾರಣದಿಂದಲೂ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ.
5. ಪರಿಶಿಷ್ಟ ಜಾತಿ ಅಭ್ಯರ್ಥಿಗಳು ಚಾಲಕ ಮತ್ತು ಚಾಲಕ-ಕಂ-ನಿರ್ವಾಹಕ ಎರಡೂ ಹುದ್ದೆಗಳಿಗೂ ಅರ್ಜಿಯನ್ನು ಸಲ್ಲಿಸ ಬಯಸಿದಲ್ಲಿ ಅರ್ಜಿ ನಮೂನೆ-2ರಲ್ಲಿ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಅಭ್ಯರ್ಥಿಯು ಅರ್ಜಿ ನಮೂನೆಯಲ್ಲಿ ಎರಡೂ ಹುದ್ದೆಗಳ ಮುಂದೆ ತೋರಿಸಲಾದ ವೃತ್ತದಲ್ಲಿ **"ಹೌದು"** ಅಥವಾ **"ಇಲ್ಲ"** ಎಂದು ನಮೂದಿಸುವುದು ಕಡ್ಡಾಯವಾಗಿರುತ್ತದೆ. ಅಭ್ಯರ್ಥಿಯು ಎರಡೂ ಹುದ್ದೆಗಳಿಗೂ ಅರ್ಜಿ ಸಲ್ಲಿಸಿದಾಗ ಯಾವ ಹುದ್ದೆಗೆ ಮೊದಲ ಆದ್ಯತೆ ಇದೆ ಎಂಬುದನ್ನು ಹುದ್ದೆಯ ಕಾಲಂನಲ್ಲಿ ಬರುವ ಹುದ್ದೆಯ ಮೇಲೆ ಆಯ್ಕೆ ಮಾಡಬೇಕಾಗುತ್ತದೆ. ಈ ರೀತಿ ತಿಳಿಸಲಾದ ಹುದ್ದೆಯ ಆದ್ಯತೆಯನ್ನು ನಂತರ ಯಾವುದೇ ಕಾರಣಕ್ಕೂ ಬದಲಾಯಿಸಲು ಅವಕಾಶವಿರುವುದಿಲ್ಲ. ಎರಡೂ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದಾಗ, ಎರಡೂ ಹುದ್ದೆಗಳ ಅರ್ಜಿಯ ಶುಲ್ಕದ ಮೊತ್ತವು ಒಂದೇ ಚಲನನಲ್ಲಿ ಮುದ್ರಿತಗೊಂಡು ಬರುತ್ತದೆ.
6. ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಒಂದು ಹಾಳೆಯ ಮೇಲಿಟ್ಟು ಅದರ ಕೆಳಗೆ ಕಪ್ಪು ಶಾಹಿಯ ಸ್ಕೆಚ್/ಮಾರ್ಕರ್ ಪೆನ್‌ಲ್ಲಿ ಸಹಿಯನ್ನು ಸ್ಕ್ಯಾನ್ ಮಾಡಿ ಅರ್ಜಿಗೆ UPLOAD ಮಾಡಬೇಕು. ಭಾವಚಿತ್ರ ಹಾಗೂ ಸಹಿಯನ್ನು UPLOAD ಮಾಡದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ.
7. ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ ತಕ್ಷಣ ಅರ್ಜಿಯಲ್ಲಿ ನಮೂದಿಸಿದ ವಿವರಗಳ ಆಧಾರದ ಮೇಲೆ ನೀಡುವ ನೊಂದಣಿ ಸಂಖ್ಯೆ, ಅರ್ಜಿಯ ಡೌನ್‌ಲೋಡ್ ಪ್ರತಿಯನ್ನು ಮುದ್ರಿಸಿಕೊಂಡು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳುವುದು ಹಾಗೂ ಪರಿಶೀಲನಾ ಸಮಯದಲ್ಲಿ ಇವುಗಳನ್ನು ಹಾಜರುಪಡಿಸುವುದು.

## VII) ಆಯ್ಕೆ ವಿಧಾನ :

ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ನಮೂದಿಸಿದ ವಿವರಗಳ ಆಧಾರದ ಮೇಲೆ ಮೂಲ ದಾಖಲಾತಿಗಳ / ದೈಹಿಕ ಅರ್ಹತೆಯ ಪರಿಶೀಲನೆ / ಚಾಲನಾ ವೃತ್ತಿ ಪರೀಕ್ಷೆಗೆ ಹಾಜರಾಗಲು ಕರೆಪತ್ರವನ್ನು ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ ತಕ್ಷಣ ನೀಡುವ ನೊಂದಣಿ ಸಂಖ್ಯೆ ಮತ್ತು ಅವರ ಜನ್ಮ ದಿನಾಂಕವನ್ನು ನಮೂದಿಸಿ ಮುಂದೆ ತಿಳಿಸಲಾಗುವ ದಿನಾಂಕಗಳಲ್ಲಿ ಮೂಲ ದಾಖಲಾತಿಗಳ / ದೈಹಿಕ ಅರ್ಹತೆಯ ಪರಿಶೀಲನೆಗೆ ಹಾಗೂ ಚಾಲನಾ ವೃತ್ತಿ ಪರೀಕ್ಷೆಗೆ ಕರೆಪತ್ರವನ್ನು ಮುದ್ರಿಸಿಕೊಳ್ಳಬಹುದಾಗಿರುತ್ತದೆ. ಈ ಕರೆಪತ್ರದಲ್ಲಿ ಅಭ್ಯರ್ಥಿಗಳು ಮೂಲ ದಾಖಲಾತಿಗಳ / ದೈಹಿಕ ಅರ್ಹತೆಯ ಪರಿಶೀಲನೆ / ಚಾಲನಾ ವೃತ್ತಿ ಪರೀಕ್ಷೆಗೆ ಹಾಜರಾಗಬೇಕಾದ ದಿನಾಂಕ, ಸ್ಥಳ ಹಾಗೂ ಯಾವ ದಾಖಲಾತಿಗಳನ್ನು ಪರಿಶೀಲನೆಗೆ ಸಲ್ಲಿಸಬೇಕೆಂಬ ಮಾಹಿತಿಯು ಲಭ್ಯವಿರುತ್ತದೆ.



Printed by BoltPDF (c) NCH Software. Free for non-commercial use only.

ಮೂಲ ದಾಖಲಾತಿಗಳ / ದೈಹಿಕ ಅರ್ಹತೆಯ ಪರಿಶೀಲನೆಗೆ ಹಾಜರಾದ ಅಭ್ಯರ್ಥಿಗಳ ಪೈಕಿ ಹುದ್ದೆಗೆ ನಿಗದಿಪಡಿಸಲಾದ ಎಲ್ಲಾ ಅರ್ಹತೆಗಳನ್ನು ಹೊಂದಿರುವ ಅರ್ಹ ಅಭ್ಯರ್ಥಿಗಳಿಗೆ ಸಂಸ್ಥೆಯ ವತಿಯಿಂದ ಒಟ್ಟು 50 ಅಂಕಗಳಿಗೆ, ತಲಾ 25 ಅಂಕಗಳಂತೆ ಎರಡು ಸಲ ಚಾಲನಾ ಸಾಮರ್ಥ್ಯ ವೃತ್ತಿ ಪರೀಕ್ಷೆಯನ್ನು ಗಣಕೀಕೃತ ಟ್ರ್ಯಾಕ್‌ನಲ್ಲಿ (ಚಾಲನಾ ಪಥ) ನಡೆಸಲಾಗುವುದು. ಸದರಿ ಪರೀಕ್ಷೆಯಲ್ಲಿ ಕನಿಷ್ಠ 25 ಅಂಕಗಳನ್ನು ಪಡೆದ ಅಭ್ಯರ್ಥಿಗಳನ್ನು ಮಾತ್ರ ಉತ್ತೀರ್ಣರೆಂದು ತೀರ್ಮಾನಿಸಿ ಆಯ್ಕೆಗೆ ಪರಿಗಣಿಸಲಾಗುವುದು.

ಚಾಲನಾ ವೃತ್ತಿ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಮಾತ್ರ ಪರಿಗಣಿಸಿ, ಸರ್ಕಾರದ ಪ್ರಚಲಿತ ಮೀಸಲಾತಿ ನಿಯಮಗಳನುಸಾರ ಆಯ್ಕೆ ಮಾಡಲಾಗುವುದು. ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳನ್ನು ಪರಿಗಣಿಸಲಾಗುವುದಿಲ್ಲ.

ಉತ್ತಮ ಚಾಲನಾ ಕೌಶಲ್ಯವಿರುವ ಅಭ್ಯರ್ಥಿಗಳ ಆಯ್ಕೆ ದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಚಾಲನಾ ವೃತ್ತಿ ಪರೀಕ್ಷೆಯ 5 ವಿವಿಧ ಪರೀಕ್ಷೆಗಳ ಪೈಕಿ ಈ ಕೆಳಕಂಡ 3 ಪರೀಕ್ಷೆಗಳಲ್ಲಿ ಎರಡು ಬಾರಿ ನಡೆಸಲಾಗುವ ಪ್ರತೀ ಪರೀಕ್ಷೆಯಲ್ಲಿ ನಿಗದಿತ ಅಂಕಗಳಲ್ಲಿ ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಗಳಿಸಿದಲ್ಲಿ ಮಾತ್ರ ಮುಂದಿನ ಪರೀಕ್ಷೆಗೆ ಅರ್ಹರಾಗುತ್ತಾರೆ.

| ಕ್ರ. ಸಂ | ಪರೀಕ್ಷೆಯ ವಿಧಾನ | ನಿಗದಿಪಡಿಸಿರುವ ಅಂಕಗಳು | | ಎರಡು ಪರೀಕ್ಷೆಗಳ ಗರಿಷ್ಠ ಅಂಕಗಳು | ಎರಡೂ ಪರೀಕ್ಷೆಗಳಿಂದ ಅಭ್ಯರ್ಥಿಯು ಗಳಿಸಬೇಕಾದ ಕನಿಷ್ಠ ಅಂಕಗಳು | ಸಮಯ |
|---|---|---|---|---|---|---|
| | | ಮೊದಲನೆ ಪರೀಕ್ಷೆ | ಎರಡನೆ ಪರೀಕ್ಷೆ | | | |
| 1 | ಬಸ್ಸನ್ನು "ಎಸ್" ರ ಪಥದಲ್ಲಿ ಹಿಂದಕ್ಕೆ ಚಲಿಸುವುದು (Reverse "S") | 7 | 7 | 14 | 7 | 3 ನಿಮಿಷ |
| 2 | ಬಸ್ಸನ್ನು ಹಿಮ್ಮುಖ ಚಲಿಸಿ ನಿಲುಗಡೆ ಮಾಡುವುದು ( Reverse Parking) | 6 | 6 | 12 | 6 | 1 ನಿಮಿಷ |
| 3 | ಬಸ್ಸನ್ನು ಏರುಗತಿಯಲ್ಲಿ ನಿಲ್ಲಿಸಿ ಮುಂದಕ್ಕೆ ಚಲಿಸುವುದು (Upgradient) | 5 | 5 | 10 | 5 | ಸಮಯ ಇಲ್ಲ |

**ಚಾಲಕ ಮತ್ತು ಚಾಲಕ-ಕಂ-ನಿರ್ವಾಹಕ (ಪಜಾ-ಹಿಂಬಾಕಿ) ಎರಡೂ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಒಂದೇ ಬಾರಿ ಚಾಲನಾ ವೃತ್ತಿ ಪರೀಕ್ಷೆ ನಡೆಸಲಾಗುವುದು. ಅವರು ಅರ್ಜಿಯಲ್ಲಿ ನೀಡಿದ ಹುದ್ದೆಯ ಮೊದಲ ಆದ್ಯತೆಯನುಸಾರ ಅವರನ್ನು ಅವರ ಅರ್ಹತೆಯ ಮೇರೆಗೆ ಆಯ್ಕೆಗೆ ಪರಿಗಣಿಸಲಾಗುವುದು. ಚಾಲನಾ ವೃತ್ತಿ ಪರೀಕ್ಷೆಯ ಪರಿಚಯ ಮಾರ್ಗದರ್ಶಿಯನ್ನು ಸಂಸ್ಥೆಯ ವೆಬ್‌ಸೈಟ್‌ನಲ್ಲಿ ನೀಡಲಾಗಿದೆ.**

## VIII) ಮೀಸಲಾತಿ :

ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು:-

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು:- **ನಮೂನೆ ' ಡಿ '**
ಆ) ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು:- **ನಮೂನೆ ' ಇ '**
ಇ) ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು:- **ನಮೂನೆ 'ಎಫ್'**

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಸೀಲ್ದಾರ್‌ರವರಿಂದ ಅಂದರೆ ತಹಶೀಲ್ದಾರ್‌ರವರ ಸಹಿ ಮತ್ತು ಮೊಹರು ಅಥವಾ ಬಾರ್ ಕೋಡ್, ಹಾಲೋಗ್ರಾಮ್ ಮತ್ತು ವಾಟರ್‌ಮಾರ್ಕ್‌ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು



Printed by BoltPDF (c) NCH Software. Free for non-commercial use only.

ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯಲ್ಲಿ ತೋರಿಸಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

**IX) ಜಾತಿ/ಪ್ರವರ್ಗ ಮೀಸಲಾತಿ** ಕೋರುವ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಎಸ್‌ಟಿಸಿ 2002 ದಿನಾಂಕಃ 11-03-2002 ರನ್ವಯ ದಿನಾಂಕಃ 11-03-2002 ರ ನಂತರ ಮತ್ತು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ 5 ವರ್ಷದೊಳಗೆ ಪಡೆದಿರುವ ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನಮೂನೆ-"ಎಫ್"ನ್ನು ಹೊಂದಿದ್ದಲ್ಲಿ ಮಾತ್ರ 2ಎ, 2ಬಿ, 3ಎ, 3ಬಿ ಗುಂಪಿನ ಮೀಸಲಾತಿ ಸೌಲಭ್ಯಕ್ಕೆ ಅರ್ಹರಿರುತ್ತಾರೆ.

**X) ಅ) ಪ.ಜಾ/ಪ.ಪಂ ಮೀಸಲಾತಿ** ಸೌಲಭ್ಯ ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಜಾತಿ ಪ್ರಮಾಣ ಪತ್ರ ನಮೂನೆ-"ಡಿ"ಯನ್ನು ಹೊಂದಿರತಕ್ಕದ್ದು. ಪರಿವಾರ, ತಳವಾರ, ಮಾಲೇರು, ಕುರುಬ, ಬೆಸ್ತ ಮತ್ತು ಕೋಳಿ ಜಾತಿಗೆ ಸೇರಿದ ಅಭ್ಯರ್ಥಿಗಳು ಪರಿಶಿಷ್ಟ ಪಂಗಡದ ನಾಯಕ, ಮಾಲೇರು, ಕಾಡುಕುರುಬ, ಜೇನುಕುರುಬ, ಗೊಂಡ, ರಾಜಗೊಂಡ, ಕೋಳಿಡೋರ ಮತ್ತು ಟೋಕ್ರಕೋಳಿ ಎಂದು ಜಾತಿ ಪ್ರಮಾಣ ಪತ್ರ ಪಡೆದಿದ್ದಲ್ಲಿ ಅವುಗಳು ಸರ್ಕಾರಿ ಆದೇಶ ಸಂಃ ಎಸ್‌ಡಬ್ಲ್ಯೂಡಿ/713/ಎಸ್‌ಎಡಿ/93 ದಿನಾಂಕಃ 11-03-2002 ರನ್ವಯ ಅಸಿಂಧು ಆಗುತ್ತದೆ. ಆದುದರಿಂದ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ದಿನಾಂಕಃ 11-03-2002 ರ ನಂತರ ಪಡೆದ ತಮ್ಮ ಜಾತಿ ಮತ್ತು ಉಪಜಾತಿಯನ್ನು ಸ್ಪಷ್ಟವಾಗಿ ನಮೂದಿಸಿರುವ ಸಮರ್ಪಕವಾದ ಜಾತಿ ಪ್ರಮಾಣ ಪತ್ರವನ್ನು ಹೊಂದಿರಬೇಕು.

**ಆ) ಪ್ರವರ್ಗ-1 ಮೀಸಲಾತಿ** ಸೌಲಭ್ಯ ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಜಾತಿ ಪ್ರಮಾಣ ಪತ್ರ ನಮೂನೆ"ಇ" ಯನ್ನು ಹೊಂದಿರತಕ್ಕದ್ದು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರುವ ಚಾಲ್ತಿಯಲ್ಲಿರುವ ಜಾತಿ ಪ್ರಮಾಣ ಪತ್ರವನ್ನು ಹೊಂದಿರಬೇಕು.

**ವಿದ್ಯಾಭ್ಯಾಸಕ್ಕಾಗಿ/ಶಿಕ್ಷಣಕ್ಕಾಗಿ/ಸರ್ಕಾರಿ ಸೌಲಭ್ಯಕ್ಕಾಗಿ ಅಥವಾ ಸಾಲಕ್ಕಾಗಿ ಪಡೆದಿರುವ ಜಾತಿ/ಆದಾಯ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.**

**XI) ಗ್ರಾಮೀಣ ಮೀಸಲಾತಿಃ** ಸರ್ಕಾರದಿಂದ ಹೊರಡಿಸಲಾದ ಅಧಿಸೂಚನೆ ಸಂಖ್ಯೆಃ ಸಿಆಸುಇ 96 ಸಸೇನಿ 2005 ದಿನಾಂಕಃ 10/08/2005 ರಲ್ಲಿ ತಿಳಿಸಿರುವಂತೆ 1ನೇ ತರಗತಿಯಿಂದ 10ನೇ ತರಗತಿವರೆಗೆ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರಿಂದ ಪಡೆದ ಪ್ರಮಾಣ ಪತ್ರದ ಮೇಲೆ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿದ ಪ್ರಮಾಣಪತ್ರ ಹಾಗೂ ಅವಶ್ಯಕವಿರುವ ಕಡೆ ಸಂಬಂಧಪಟ್ಟ ತಹಶೀಲ್ದಾರರವರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ಒಳಗಾಗಿ ದೃಢೀಕರಣ ಪತ್ರವನ್ನು ಹೊಂದಿರುವ ಅಭ್ಯರ್ಥಿಗಳು ಮಾತ್ರ ಗ್ರಾಮೀಣ ಮೀಸಲಾತಿಗೆ ಅರ್ಹರಿರುತ್ತಾರೆ. ಸಾಮಾನ್ಯ ವರ್ಗದ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಸೌಲಭ್ಯ ಕೋರಿದಲ್ಲಿ ಮೇಲೆ ತಿಳಿಸಿರುವಂತೆ ಪ್ರಮಾಣ ಪತ್ರ ಸಲ್ಲಿಸುವುದರ ಜೊತೆಗೆ ನಿಗದಿತ ನಮೂನೆ-1 ರಲ್ಲಿ ಸಂಬಂಧಪಟ್ಟ ತಹಶೀಲ್ದಾರರಿಂದ ಅವರು ಕ್ರೀಮಿಲೇಯರ್ (ಮೇಲುಸ್ತರ) ಪರಿಮಿತಿಯಲ್ಲಿ ಬರುವುದಿಲ್ಲವೆಂದು ದೃಢೀಕರಿಸಿದ ಪ್ರಮಾಣ ಪತ್ರ ಹೊಂದಿರಬೇಕು.

**XII) ಯೋಜನಾ ನಿರಾಶ್ರಿತ ಮೀಸಲಾತಿಃ** ಸರ್ಕಾರದಿಂದ ಹೊರಡಿಸಲಾದ ಅಧಿಸೂಚನೆ ಸಂಖ್ಯೆಃ ಡಿಪಿಎಆರ್ 23 ಎಸ್‌ಆರ್‌ಆರ್ 99 ದಿನಾಂಕಃ 23-11-2000 ರಲ್ಲಿ ತಿಳಿಸಿರುವಂತೆ ಯೋಜನೆಗಳ ನಿರಾಶ್ರಿತರ ಮೀಸಲಾತಿಗೆ ಅರ್ಹ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅಧಿಕೃತ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ಒಳಗಾಗಿ ಪಡೆದ ಪ್ರಮಾಣ ಪತ್ರವನ್ನು ಹೊಂದಿದ್ದಲ್ಲಿ ಮಾತ್ರ ಯೋಜನಾ ನಿರಾಶ್ರಿತರ ಮೀಸಲಾತಿಗೆ ಅರ್ಹರಾಗುತ್ತಾರೆ. **ಆದರೆ ಸದರಿ ಸರ್ಕಾರದ ಆದೇಶದನುಸಾರ ಈ ನಿಯಮ ಜಾರಿಗೆ ಬಂದ ದಿನಾಂಕದಿಂದ ಹಿಂದಕ್ಕೆ 20 ವರ್ಷಗಳ ಪೂರ್ವದಲ್ಲಿ ಅಥವಾ 20 ವರ್ಷಗಳ ಹಿಂದೆ ಭೂಮಿಯನ್ನು ಸ್ವಾಧೀನ ಪಡಿಸಿಕೊಂಡಂತಹ ಪ್ರಕರಣಗಳ ಅಭ್ಯರ್ಥಿಗಳು ಈ ಮೀಸಲಾತಿ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.**

**XIII) ಕನ್ನಡ ಮಾಧ್ಯಮದಲ್ಲಿ ಓದಿದವರಿಗೆ ಮೀಸಲಾತಿಃ** ಈ ಕುರಿತಂತೆ ಸರ್ಕಾರದಿಂದ ಹೊರಡಿಸಲಾದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ / 71/ ಎಸ್‌ಆರ್‌ಆರ್ / 2001/ ಬೆಂಗಳೂರು, ದಿನಾಂಕಃ24-10-2002 ರಲ್ಲಿ ತಿಳಿಸಿರುವಂತೆ 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ಒಳಗಾಗಿ ಪಡೆದ ನಿಗದಿತ ಪ್ರಮಾಣ ಪತ್ರ & ಅಧಿಕೃತ ಮೊಹರು ಹೊಂದಿದ ಪ್ರಮಾಣ ಪತ್ರ ಹೊಂದಿರುವವರು ಮಾತ್ರ ಕನ್ನಡ ಮಾಧ್ಯಮ ಮೀಸಲಾತಿಗೆ ಅರ್ಹರಿರುತ್ತಾರೆ.



Printed by BoltPDF (c) NCH Software. Free for non-commercial use only.

(ಮೇಲ್ಕಂಡ ಮೀಸಲಾತಿಯ ಪ್ರಮಾಣ ಪತ್ರಗಳ ನಮೂನೆಗಳನ್ನು ಸಂಸ್ಥೆಯ ವೆಬ್‌ಸೈಟ್‌ನಲ್ಲಿ ಬಿತ್ತರಿಸಲಾಗಿದೆ. ಸದರಿ ನಮೂನೆಗಳನ್ವಯ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪ್ರಮಾಣ ಪತ್ರಗಳನ್ನು ಹೊಂದಿರಬೇಕು)

**XIV) <u>ಮಾಜಿ ಸೈನಿಕ ಮೀಸಲಾತಿ:</u>** ಅಭ್ಯರ್ಥಿಯು ಭಾರತದ ಸಶಸ್ತ್ರ ಪಡೆಯಲ್ಲಿ ಕನಿಷ್ಠ 15 ವರ್ಷಗಳ ಸೇವೆ ಸಲ್ಲಿಸಿರುವ ಬಗ್ಗೆ ನಿಗದಿತ ಡಿಸ್‌ಜಾರ್ಜ್ ಪ್ರಮಾಣ ಪತ್ರ ಹೊಂದಿರಬೇಕು.

**XV) <u>ಕನ್ನಡ ಭಾಷಾಜ್ಞಾನ:</u>** ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ವ್ಯಾಸಂಗ ಮಾಡಿದ್ದಲ್ಲಿ ಮಾತ್ರ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುತ್ತಾರೆ. ಇಲ್ಲವಾದಲ್ಲಿ ಜಾರಿಯಲ್ಲಿರುವ ನಿಯಮಾವಳಿಯಂತೆ ಸಂಸ್ಥೆಯು ನಡೆಸುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಒಂದೇ ಅವಕಾಶದಲ್ಲಿ ಉತ್ತೀರ್ಣರಾಗಬೇಕು. ಇಲ್ಲದಿದ್ದಲ್ಲಿ ಅವರ ಆಯ್ಕೆಯನ್ನು ರದ್ದುಗೊಳಿಸಲಾಗುವುದು.

**XVI) <u>ಸಾರಿಗೆ ಸಂಸ್ಥೆಯ ಇಲಾಖಾ ಅಭ್ಯರ್ಥಿಗಳಿಗಾಗಿ :</u>**

1. ಮೇಲಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಯಸುವ ಇಲಾಖಾ ಅಭ್ಯರ್ಥಿಗಳು ವಯೋಮಿತಿ ವಿನಾಯಿತಿಯನ್ನು ಹೊರತುಪಡಿಸಿ ಉಳಿದೆಲ್ಲಾ ಷರತ್ತುಗಳ ವಿಷಯದಲ್ಲಿ ಇತರೆ ಅಭ್ಯರ್ಥಿಗಳೊಂದಿಗೆ ಸ್ಪರ್ಧಿಸಬೇಕಿರುತ್ತದೆ.
2. ಮೇಲಿನ ಹುದ್ದೆಗಳಿಗೆ ಅರ್ಜಿಯನ್ನು ಸಲ್ಲಿಸುವ ಸಾರಿಗೆ ಸಂಸ್ಥೆಯ ಉದ್ಯೋಗಿಗಳು ಅರ್ಜಿ ಸಲ್ಲಿಸುವ ಪೂರ್ವದಲ್ಲಿ ಪ್ರಸ್ತುತ ಅವರು ಕಾರ್ಯ ನಿರ್ವಹಿಸುತ್ತಿರುವ ವಿಭಾಗ ಮುಖ್ಯಸ್ಥರಿಂದ ಕಡ್ಡಾಯವಾಗಿ ನಿರಾಕ್ಷೇಪಣಾ ಪತ್ರವನ್ನು ಪಡೆದು ಅರ್ಜಿ ಸಲ್ಲಿಸತಕ್ಕದ್ದು.
3. ಈ ಉದ್ಯೋಗಿಗಳು ತಮ್ಮ ಸೇವಾವಧಿಯಲ್ಲಿನ ಶಿಸ್ತು / ಅಪಘಾತಗಳ ಕುರಿತು ಅಪರಾಧ ಇತಿಹಾಸ ಪಟ್ಟಿಯನ್ನು ಸಂಬಂಧಿಸಿದ ವಿಭಾಗೀಯ ಮುಖ್ಯಸ್ಥರಿಂದ ಪಡೆದು ಮೂಲ ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸುವುದು.
4. ಇತರೆ ಸಾರಿಗೆ ಸಂಸ್ಥೆಗಳನ್ನೂ ಒಳಗೊಂಡಂತೆ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ನೌಕರರು ಆಯ್ಕೆ ಹೊಂದಿದಲ್ಲಿ ಅಂತಹವರಿಗೆ ಸುತ್ತೋಲೆ ಸಂ: 1485 ದಿನಾಂಕ: 12–04–2013 ರನ್ವಯ ವೇತನ ಸಂರಕ್ಷಣೆ ನೀಡುವ ಕುರಿತು ನಿಯಮಾನುಸಾರ ಪರಿಶೀಲಿಸಲಾಗುವುದು.

**XVII) <u>ತರಬೇತಿ ಅವಧಿ ಮತ್ತು ಭತ್ಯೆ :</u>** ಆಯ್ಕೆಗೊಂಡ ಅರ್ಹ ಅಭ್ಯರ್ಥಿಯನ್ನು ಎರಡು ವರ್ಷಗಳ ಕಾಲ "**ಕೆಲಸದ ಮೇಲೆ ತರಬೇತಿ**"ಗೆ (On the Job Trainee) ನಿಯೋಜಿಸಲಾಗುವುದು. ಸದರಿ ಅವಧಿಯಲ್ಲಿ ಈ ಕೆಳಕಂಡಂತೆ ಮಾಸಿಕ ತರಬೇತಿ ಭತ್ಯೆಯನ್ನು ನೀಡಲಾಗುವುದು.

| ಹುದ್ದೆ | ತರಬೇತಿ ಭತ್ಯೆ |
|---|---|
| ಚಾಲಕ | ರೂ. 10000-00 |
| ಚಾಲಕ–ಕಂ–ನಿರ್ವಾಹಕ | ರೂ. 9100-00 |

**<u>XVIII) ವೇತನ ಶ್ರೇಣಿ :</u>** ಎರಡು ವರ್ಷಗಳ ಕೆಲಸದ ಮೇಲೆ ತರಬೇತಿ ಅವಧಿಯನ್ನು ತೃಪ್ತಿಕರವಾಗಿ / ಸಮರ್ಪಕವಾಗಿ ಪೂರೈಸಿದಲ್ಲಿ ಸಂಸ್ಥೆಯಲ್ಲಿ ಲಭ್ಯವಾಗುವ ಖಾಲಿ ಹುದ್ದೆಗಳಿಗೆ ಅನುಸಾರವಾಗಿ ಈ ಕೆಳಕಂಡ ವೇತನ ಶ್ರೇಣಿಯಲ್ಲಿ ಪರೀಕ್ಷಾರ್ಥ ಸೇವೆಯ ಮೇಲೆ ನೇಮಕ ಮಾಡಲಾಗುವುದು.

| | |
|---|---|
| ಚಾಲಕ / ಚಾಲಕ–ಕಂ–ನಿರ್ವಾಹಕ | 12400-170-12740-250-14240-320-15840-420-16680-530-18270-640-19550 |

**<u>XIX) ವಿಶೇಷ ಸೂಚನೆ :</u>** ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿರುವಂತೆ ಈ ಕೆಳಕಂಡ ಮೂಲ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ಕೊನೆಯ ದಿನಾಂಕದೊಳಗೆ ಹೊಂದಿರಬೇಕು ಹಾಗೂ ಸಂಸ್ಥೆಯು ಮೂಲ ದಾಖಲಾತಿಗಳ ಪರಿಶೀಲನೆಗೆ ಹಾಜರಾಗಲು ಸೂಚಿಸಿದಾಗ ತಪ್ಪದೇ ಹಾಜರುಪಡಿಸತಕ್ಕದ್ದು.

1) ಅಭ್ಯರ್ಥಿಯ ಭಾವಚಿತ್ರ ಅಂಟಿಸಿದ ಅರ್ಜಿ. [ಅರ್ಜಿ ಸಲ್ಲಿಸಿದ ಸಮಯದಲ್ಲಿ ಮುದ್ರಿಸಿಟ್ಟುಕೊಳ್ಳತಕ್ಕದ್ದು]
2) ಅರ್ಜಿ ಶುಲ್ಕ ಪಾವತಿ ಮಾಡಿರುವ ಬಗ್ಗೆ ಅಂಚೆ ಕಛೇರಿಯಲ್ಲಿ ನೀಡುವ ಚಲನ್‌ನ ಮೂಲ ಪ್ರತಿ.



Printed by BoltPDF (c) NCH Software. Free for non-commercial use only.

3) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ವರ್ಗಾವಣಾ ಪ್ರಮಾಣ ಪತ್ರ / ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ (Cumulative Record) ಉದ್ಧೃತ ಭಾಗ.
4) ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆಯ ಅಂಕಪಟ್ಟಿ.
5) ಚಾಲ್ತಿಯಲ್ಲಿರುವ ಸರಕು ಸಾಗಾಣಿಕೆ / ಪ್ರಯಾಣಿಕರ ಭಾರಿ ವಾಹನ ಚಾಲನಾ ಪರವಾನಿಗೆ ಮತ್ತು ಕರ್ನಾಟಕ ಬ್ಯಾಡ್ಜ್.
6) ಚಾಲ್ತಿಯಲ್ಲಿರುವ ನಿರ್ವಾಹಕರ ಲೈಸೆನ್ಸ್ ಮತ್ತು ಕರ್ನಾಟಕ ಬ್ಯಾಡ್ಜ್. **(ಚಾಲಕ-ಕಂ-ನಿರ್ವಾಹಕ ಹುದ್ದೆಗೆ)**
7) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)
8) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
9) ಯೋಜನಾ ನಿರಾಶ್ರಿತ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
10) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
11) ಸೈನಿಕ ಸೇವೆಯಿಂದ ಬಿಡುಗಡೆಯಾದ / ಡಿಸ್‌ಚಾರ್ಜ್ ಹೊಂದಿದ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
12) ಅಶಕ್ತ ಮಾಜಿ ಸೈನಿಕರ ಅವಲಂಬಿತರೆಂದು ಅರ್ಜಿ ಶುಲ್ಕದಲ್ಲಿ ರಿಯಾಯತಿ ಪಡೆದಿದ್ದಲ್ಲಿ ಈ ಬಗ್ಗೆ ಪ್ರಮಾಣ ಪತ್ರ.
13) ಇಲಾಖಾ ಅಭ್ಯರ್ಥಿಯಾಗಿದ್ದಲ್ಲಿ, ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರಸ್ಥರಿಂದ ಪಡೆದ ಸೇವಾ ಪ್ರಮಾಣ ಪತ್ರ.
14) ಆಧಾರ ಕಾರ್ಡ ಪ್ರತಿ.

**XX) ಇತರೆ ಸೂಚನೆಗಳು :**

1) ಅಭ್ಯರ್ಥಿಗಳು ಮೂಲ ದಾಖಲೆ ಪರಿಶೀಲನೆಗೆ ಮತ್ತು ಚಾಲನಾ ವೃತ್ತಿ ಪರೀಕ್ಷೆಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.
2) ಆಯ್ಕೆ ಹೊಂದಿ ಸೇವೆಯಲ್ಲಿ ಖಾಯಂಗೊಳ್ಳುವ ಅಭ್ಯರ್ಥಿಗಳು ಉಪದಾನ ಪಾವತಿ ಕಾಯ್ದೆ 1972 ರ ಪ್ರಕಾರ ಉಪದಾನ ಪಾವತಿಗೆ ಅರ್ಹರಾಗುತ್ತಾರೆ ಮತ್ತು ಮುಕ್ತ ವೇತನ ಶ್ರೇಣಿಗೆ ಅರ್ಹರಾಗುವುದಿಲ್ಲ.
3) ಸಂಸ್ಥೆಯ ನೇಮಕಾತಿ ನಿಯಮಾವಳಿ ಅನುಸಾರ ಅಂಗವಿಕಲರು ಈ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.
4) ಉದ್ಯೋಗ ವಿನಿಮಯ ಕೇಂದ್ರದಲ್ಲಿ ಹೆಸರನ್ನು ನೊಂದಾಯಿಸಿದ ಅರ್ಹ ಅಭ್ಯರ್ಥಿಗಳೂ ಸಹ ಈ ಜಾಹೀರಾತಿನ ಅನುಸಾರ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.
5) ಆಯ್ಕೆಯಾದ ಅಭ್ಯರ್ಥಿಗಳು ವಾ.ಕ.ರ.ಸಾ.ಸಂಸ್ಥೆಯಿಂದ ಇತರೇ ಸಂಸ್ಥೆಗಳಾದ ಕ.ರಾ.ರ.ಸಾ.ಸಂಸ್ಥೆ, ಈ.ಕ.ರ.ಸಾ.ಸಂಸ್ಥೆ ಮತ್ತು ಬೆಂ.ಮ.ಸಾ.ಸಂಸ್ಥೆಗಳಿಗೆ ವರ್ಗಾವಣೆ ಹೊಂದಲು ಅವಕಾಶವಿರುವುದಿಲ್ಲ.
6) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿದ ಅರ್ಜಿಯ ಡೌನ್ ಲೋಡ್ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.
7) ಅಭ್ಯರ್ಥಿಗಳು ಅಂಚೆ ಕಛೇರಿಯಲ್ಲಿ ಜಮಾ ಮಾಡಿರುವ ಅರ್ಜಿ ಶುಲ್ಕದ ಪ್ರತಿಯನ್ನು ತಮ್ಮಲ್ಲಿ ಇಟ್ಟುಕೊಳ್ಳುವುದು ಹಾಗೂ ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಮೂಲ ಪ್ರತಿಯನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
8) ನೈತಿಕ ದುರ್ನಡತೆಯಿಂದಾಗಿ / ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ಈ ಸಂಸ್ಥೆಯಲ್ಲಿ ಅಥವಾ ರಾಜ್ಯ / ಕೇಂದ್ರ / ಸ್ಥಳೀಯ ಸಂಸ್ಥೆ / ಕೈಗಾರಿಕಾ / ವಾಣಿಜ್ಯಕ್ಕೆ ಸಂಬಂಧಪಟ್ಟ ಅಥವಾ ರಾಜ್ಯ ಸಾರಿಗೆ ಅಧೀನದಲ್ಲಿರುವ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ / ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಕ.ರಾ.ರ.ಸಾ.ಸಂಸ್ಥೆ / ಈ.ಕ.ರ.ಸಾ.ಸಂಸ್ಥೆ / ಬೆಂ.ಮ.ಸಾ.ಸಂಸ್ಥೆ ಮತ್ತು ವಾ.ಕ.ರ.ಸಾ.ಸಂಸ್ಥೆಯಲ್ಲಿ ಆಯ್ಕೆಯಾದ ಅಭ್ಯರ್ಥಿಯು ತಾತ್ಕಾಲಿಕ / ಬದಲಿ / ತರಬೇತಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ / ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದುಹಾಕಿದ್ದಲ್ಲಿ / ವಜಾ ಮಾಡಲ್ಪಟ್ಟದ್ದು ಕಂಡು ಬಂದಲ್ಲಿ ನೇಮಕಾತಿಗೆ ಅನರ್ಹರಾಗುತ್ತಾರೆ.



Printed by BoltPDF (c) NCH Software. Free for non-commercial use only.

9) ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆಯಾದಲ್ಲಿ ಆ ವಿಳಾಸಕ್ಕೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

10) ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಆನ್‌ಲೈನ್ ಮುಖಾಂತರ ವೆಬ್‌ಸೈಟ್ ನಲ್ಲಿ ಲಭ್ಯವಿರುವ ಸೂಚನೆಗಳನ್ನು ತಪ್ಪದೇ ಗಮನಿಸತಕ್ಕದ್ದು.

11) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ಅವರು ವಂಚಿತರಾದಲ್ಲಿ ಅದಕ್ಕೆ ಅಭ್ಯರ್ಥಿಗಳೇ ನೇರ ಜವಾಬ್ದಾರರು. ಅಪೂರ್ಣ, ಸುಳ್ಳು ಮಾಹಿತಿ, ನಿಗದಿತ ಅರ್ಜಿ ಶುಲ್ಕಕ್ಕಿಂತ ಕಡಿಮೆ ಅರ್ಜಿ ಶುಲ್ಕ ಸಲ್ಲಿಸಿದ ಹಾಗೂ ಅರ್ಜಿ ಶುಲ್ಕ ಸಲ್ಲಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

12) ಅಭ್ಯರ್ಥಿಗಳು ಪಜಾ / ಪಪಂ/ ವರ್ಗ–I / 2ಎ/ 2ಬಿ / 3ಎ / 3ಬಿ ಅಡಿಯಲ್ಲಿ ಹಾಗೂ ಇತರೆ ಸಮತಳ ಮೀಸಲಾತಿ ಅನ್ವಯ ಗ್ರಾಮೀಣ / ಮಾಜಿ ಸೈನಿಕ / ಕನ್ನಡ ಮಾಧ್ಯಮ / ಯೋಜನಾ ನಿರಾಶ್ರಿತ ಇತ್ಯಾದಿಗಳ ಮೀಸಲಾತಿ ಕೋರುತ್ತಿದ್ದಲ್ಲಿ ಕರ್ನಾಟಕ ಸರ್ಕಾರವು ಪ್ರಸ್ತುತ ನಿಗದಿಪಡಿಸಿರುವ ಅವಶ್ಯಕತೆಯನುಸಾರ ಅರ್ಹತೆಯನ್ನು ಸರಿಯಾಗಿ ತಿಳಿದುಕೊಂಡು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪ್ರಮಾಣ ಪತ್ರಗಳನ್ನು ಹೊಂದಿದ್ದಲ್ಲಿ ಮಾತ್ರ ಸಂಬಂಧಿಸಿದ ಪ್ರವರ್ಗದಲ್ಲಿ ಮೀಸಲಾತಿ ಸೌಲಭ್ಯವನ್ನು ಪಡೆಯಬಹುದಾಗಿರುತ್ತದೆ.

13) ಸುಳ್ಳು ಮಾಹಿತಿ ಅಥವಾ ನಕಲಿ ಪ್ರಮಾಣ ಪತ್ರ/ ದಾಖಲೆಗಳನ್ನು ಸಲ್ಲಿಸಿ ನೌಕರಿ ಪಡೆದಿರುವುದು ಯಾವುದೇ ಸಂದರ್ಭದಲ್ಲಿ ಕಂಡು ಬಂದಲ್ಲಿ ಅವರನ್ನು ಯಾವುದೇ ಮೂನ್ಸೂಚನೆ ನೀಡದೆ ಸೇವೆಯಿಂದ ವಜಾ ಮಾಡುವುದರ ಜೊತೆಗೆ ಅವರ ವಿರುದ್ಧ ಕಾನೂನು ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು.

14) ಅಭ್ಯರ್ಥಿಗಳ ಅರ್ಹತೆ ವಿಷಯದಲ್ಲಿ ವಾ.ಕ.ರ.ಸಾ.ಸಂಸ್ಥೆಯ ನಿರ್ಧಾರವೇ ಅಂತಿಮವಾಗಿರುತ್ತದೆ.

15) ನೇಮಕಾತಿ ವಿವಿಧ ಹಂತಕ್ಕೆ ಸಂಬಂಧಪಟ್ಟ ಎಲ್ಲಾ ವಿವರಗಳನ್ನು ಸಂಸ್ಥೆಯ ವೆಬ್‌ಸೈಟ್ www.nwkrtc.in ನಲ್ಲಿ ಪಡೆಯಬಹುದಾಗಿರುತ್ತದೆ. ಆದ್ದರಿಂದ, ನೇಮಕಾತಿ ಪ್ರಕ್ರಿಯೆಗಳ ಬಗ್ಗೆ ಅಭ್ಯರ್ಥಿಗಳು ಯಾವುದೇ ರೀತಿಯ ಪತ್ರ ವ್ಯವಹಾರ ಅಥವಾ ವಿಚಾರಣೆಗಳಿಗೆ ಆಸ್ಪದವಿರುವುದಿಲ್ಲ.

16) ಈ ಹುದ್ದೆಗಳಿಗೆ ಅಭ್ಯರ್ಥಿಗಳ ಆಯ್ಕೆಯನ್ನು ಅವರು ಚಾಲನಾ ವೃತ್ತಿ ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳು ಮತ್ತು ಪ್ರಚಲಿತ ಮೀಸಲಾತಿ ನಿಯಮದ ಅನುಸಾರ ಮಾಡುವುದರಿಂದ ಅಭ್ಯರ್ಥಿಗಳು ಯಾವುದೇ ಆಮಿಷಕ್ಕೆ ಒಳಗಾಗಬಾರದು. **ಒಬ್ಬ ಅಭ್ಯರ್ಥಿಯು ಒಂದೇ ಅರ್ಜಿಯನ್ನು ಸಲ್ಲಿಸತಕ್ಕದ್ದು, ಒಂದಕ್ಕಿಂತ ಹೆಚ್ಚಿನ ಅರ್ಜಿಗಳನ್ನು ಸಲ್ಲಿಸಿದಾಗ್ಯೂ, ಸದರಿ ಅಭ್ಯರ್ಥಿಯ ಕ್ರಮಬದ್ಧವಾದ ಅರ್ಜಿಯನ್ನು ಮಾತ್ರ ಗಣನೆಗೆ ತೆಗೆದುಕೊಂಡು ಅರ್ಹರಿದ್ದಲ್ಲಿ ಚಾಲನಾ ವೃತ್ತಿ ಪರೀಕ್ಷೆಗೆ ಒಂದು ಬಾರಿ ಮಾತ್ರ ಅವಕಾಶ ನೀಡಲಾಗುವುದು. ಚಾಲಕ ಮತ್ತು ಚಾಲಕ–ಕಂ–ನಿರ್ವಾಹಕ ಎರಡೂ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು ಒಂದೇ ಅರ್ಜಿಯನ್ನು ಸಲ್ಲಿಸತಕ್ಕದ್ದು ಹಾಗೂ ಹುದ್ದೆಗಳ ಆದ್ಯತೆಯನ್ನು ತಿಳಿಸುವುದು. ಚಾಲಕ ಮತ್ತು ಚಾಲಕ–ಕಂ–ನಿರ್ವಾಹಕ ಎರಡೂ ಹುದ್ದೆಗಳಿಗೆ ಒಂದು ಬಾರಿ ಮಾತ್ರ ಚಾಲನಾ ವೃತ್ತಿ ಪರೀಕ್ಷೆಯನ್ನು ನಡೆಸಿ, ಅದೇ ಅಂಕಗಳನ್ನು ಎರಡೂ ಹುದ್ದೆಗಳ ಆಯ್ಕೆಗೆ ಪರಿಗಣಿಸಲಾಗುವುದು. ಆದರೆ ಅಭ್ಯರ್ಥಿಗಳು ಎರಡೂ ಹುದ್ದೆಗಳಿಗೆ ನಿಗದಿಪಡಿಸಿದ ಅರ್ಜಿ ಶುಲ್ಕವನ್ನು ಪಾವತಿಸಬೇಕಾಗುತ್ತದೆ.**

17) ಅಭ್ಯರ್ಥಿಗಳು ತಮ್ಮ ಆಯ್ಕೆಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಪ್ರಭಾವ / ಒತ್ತಡ ತರಬಾರದು. ಇಂತಹ ಯಾವುದೇ ಪ್ರಕರಣಗಳು ಸಂಸ್ಥೆಯ ಗಮನಕ್ಕೆ ಬಂದಲ್ಲಿ ಅವರನ್ನು ಅನರ್ಹಗೊಳಿಸಲಾಗುವುದು.



Printed by BoltPDF (c) NCH Software. Free for non-commercial use only.

18) ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹತೆ ಪಡೆದ ಅಭ್ಯರ್ಥಿಗಳು ಪರಿಶೀಲನಾ ಸಂದರ್ಭದಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಪ್ರತಿಯೊಂದು ಮಾಹಿತಿಗೆ ಪೂರಕವಾದ ಮತ್ತು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂತೆ ಚಾಲ್ತಿಯಲ್ಲಿರುವ ಎಲ್ಲಾ ದಾಖಲಾತಿ : ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸಬೇಕು. ತಪ್ಪಿದಲ್ಲಿ ಸದರಿ ಅರ್ಹತೆ/ಸೌಲಭ್ಯಗಳನ್ನು ಕಳೆದುಕೊಳ್ಳುತ್ತಾರೆ. **ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.**

19) ಅಭ್ಯರ್ಥಿಗಳು ನಿಗಮದ ವೆಬ್‌ಸೈಟ್ www.nwkrtc.in ನಲ್ಲಿ ಆಗಿಂದಾಗ್ಗೆ ನೀಡುವ ಸೂಚನೆಗಳನ್ನು ಗಮನಿಸತಕ್ಕದ್ದು.

ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ: 08/01/2020, 17-30 ಗಂಟೆಯವರೆಗೆ
ಅರ್ಜಿ ಶುಲ್ಕ ಪಾವತಿಗೆ ಅಂತಿಮ ದಿನಾಂಕ: 10/01/2020 (ಅಂಚೆ ಕಚೇರಿ ವೇಳೆಯಲ್ಲಿ)

ಸಹಿ/-
**ವ್ಯವಸ್ಥಾಪಕ ನಿರ್ದೇಶಕರು**

**ಪ್ರತಿಯನ್ನು : ಆದರಪೂರ್ವಕವಾಗಿ :**

1. ಉಪ ನಿರ್ದೇಶಕರು (ಕೇಂದ್ರಸ್ಥಾನ), ಸಮಾಜ ಕಲ್ಯಾಣ ಇಲಾಖೆ, ಡಾ/ಅಂಬೇಡ್ಕರ್ ಭವನ, ವಸಂತನಗರ, ಬೆಂಗಳೂರು ರವರ ಮಾಹಿತಿಗಾಗಿ.
2. ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ (ಎನ್‌ಫೋರ್ಸ್‌ಮೆಂಟ್ ಸೆಲ್), 4ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು-1 ರವರ ಮಾಹಿತಿಗಾಗಿ.
3. ನಿರ್ದೇಶಕರು, ವೃತ್ತಿ ಮತ್ತು ಉದ್ಯೋಗ ವಿನಿಮಯ ಕೇಂದ್ರ, ಸುಬ್ಬಯ್ಯ ರಸ್ತೆ ಬೆಂಗಳೂರು
4. ನಿರ್ದೇಶಕರು, ವೃತ್ತಿ ಮತ್ತು ಉದ್ಯೋಗ ತರಬೇತಿ 9/1, ಶ್ರೀ. ಪ್ರಕಾಶ ಕಾಂಪ್ಲೆಕ್ಸ್, ಪಿ. ಕಾಳಿಂಗ್‌ರಾವ್ ರಸ್ತೆ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಾರಿಗೆ ಇಲಾಖೆ, ವಿಧಾನಸೌಧ ಬೆಂಗಳೂರು ರವರ ಮಾಹಿತಿಗಾಗಿ.
6. ಎಲ್ಲಾ ಜಿಲ್ಲಾಧಿಕಾರಿಗಳು ರವರ ಮಾಹಿತಿ ಹಾಗೂ ಜಾಹೀರಾತಿನ ಪ್ರತಿಯನ್ನು ಸೂಚನಾ ಫಲಕದ ಮೇಲೆ ಪ್ರಕಟಿಸಲು ಕೋರಲಾಗಿದೆ.
7. ಎಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು ರವರ ಮಾಹಿತಿ ಹಾಗೂ ಜಾಹೀರಾತು ಪ್ರತಿಯನ್ನು ಸೂಚನಾ ಫಲಕದ ಮೇಲೆ ಪ್ರಕಟಿಸಲು ಕೋರಲಾಗಿದೆ.
8. ಎಲ್ಲಾ ಜಿಲ್ಲಾ ಉದ್ಯೋಗಾಧಿಕಾರಿಗಳು ರವರ ಮಾಹಿತಿ ಹಾಗೂ ಜಾಹೀರಾತು ಪ್ರತಿಯನ್ನು ಸೂಚನಾ ಫಲಕದ ಮೇಲೆ ಪ್ರಕಟಿಸಲು ಹಾಗೂ ತಮ್ಮ ಉದ್ಯೋಗ ವಿನಿಮಯ ಕಛೇರಿಯಲ್ಲಿ ಹೆಸರನ್ನು ನೊಂದಾಯಿಸಿದ ಅರ್ಹ ಅಭ್ಯರ್ಥಿಗಳಿಗೆ ಈ ಹುದ್ದೆಗೆ ಅರ್ಜಿ ಸಲ್ಲಿಸಲು ಸೂಚಿಸುವಂತೆ ಕೋರಲಾಗಿದೆ.
9. ವ್ಯವಸ್ಥಾಪಕರು ನಿರ್ದೇಶಕರು, ಕ.ರಾ.ರ.ಸಾ.ಸಂಸ್ಥೆ, ಕೇಂದ್ರ ಕಛೇರಿ, ಬೆಂಗಳೂರು ರವರ ಹಿರಿಯ ಆಪ್ತ ಕಾರ್ಯದರ್ಶಿಯವರ ಮಾಹಿತಿಗಾಗಿ.
10. ನಿರ್ದೇಶಕರು(ಸಿಬ್ಬಂದಿ:ಪರಿಸರ) ಕ.ರಾ.ರ.ಸಾ.ಸಂಸ್ಥೆ ಕೇಂದ್ರ ಕಛೇರಿ, ಬೆಂಗಳೂರು ರವರ ಹಿರಿಯ ಆಪ್ತ ಕಾರ್ಯದರ್ಶಿಯವರ ಮಾಹಿತಿಗಾಗಿ.
11. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು ಕ.ರಾ.ರ.ಸಾ.ಸಂಸ್ಥೆ / ಬೆಂ.ಮ.ಸಾ.ಸಂಸ್ಥೆ/ ಈ.ಕ.ರ.ಸಾ.ಸಂಸ್ಥೆ ರವರ ಮಾಹಿತಿಗಾಗಿ.
12. ಎಲ್ಲಾ ಇಲಾಖಾ ಮುಖ್ಯಸ್ಥರು, ವಾ.ಕ.ರ.ಸಾ.ಸಂಸ್ಥೆ ರವರ ಮಾಹಿತಿಗಾಗಿ.
13. ಎಲ್ಲಾ ವಿಭಾಗೀಯ ನಿಯಂತ್ರಣಾಧಿಕಾರಿಗಳು / ಕಾರ್ಯ ವ್ಯವಸ್ಥಾಪಕರು, ಪ್ರಾ.ಕಾ.ಹು / ಪ್ರಾಂಶುಪಾಲರು, ಪ್ರಾ.ತ.ಕೇ, ಹುಬ್ಬಳ್ಳಿ / ಕಾರ್ಯನಿರ್ವಾಹಕ ಅಭಿಯಂತರರು, ಕಾಮಗಾರಿ ವಿಭಾಗ, ಬೆಳಗಾವಿ ರವರ ಮಾಹಿತಿಗಾಗಿ ಹಾಗೂ ಪ್ರತಿಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಲಾಗಿದೆ.

**ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು**



Printed by BoltPDF (c) NCH Software. Free for non-commercial use only.